<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.131/2023</u>

ದಿಃ 16.03.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-7 Pw-4

| | | |
|---|---|---|
| ಹೆಸರು | ಃ | ಗಣೇಶ್ ಡಿ ಎಂ |
| ತಂದೆಯ ಹೆಸರು | ಃ | ಮುನಿಲಿಂಗೇಗೌಡ |
| ವಯಸ್ಸು | ಃ | 39 ವರ್ಷ |
| ಉದ್ಯೋಗ | ಃ | ಹೆಚ್‌ಸಿ ನಂಬರ್ 345 ರಾಮನಗರ ಮಹಿಳಾ ಪೊಲೀಸ್ ಠಾಣೆ |
| ವಾಸಸ್ಥಳ | ಃ | ರಾಮನಗರ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ನಾನು ಕಳೆದ 4 ವರ್ಷಗಳಿಂದ ರಾಮನಗರದ ಮಹಿಳಾ ಪೊಲೀಸ್ ಠಾಣೆಯಲ್ಲಿ ಹೆಚ್‌ಸಿ ನಂಬರ್ 345 ಎಂದು ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿಃ07.07.2023ರಂದು ತನಿಖಾಧಿಕಾರಿಯವರಾದ ಚಾಸಾ.10 ಇವರ ನಿರ್ದೇಶನದ ಮೇರೆಗೆ ಸದರಿಯವರು ಸ್ಥಳ ಪಂಚನಾಮೆಯನ್ನು ಮಾಡುವ ಸಮಯದಲ್ಲಿ ನಮ್ಮ ಠಾಣೆಗೆ ಸಂಬಂಧಿಸಿದ ಹ್ಯಾಂಡಿಕ್ಯಾಂ ಮುಖಾಂತರ ಎರಡು ವರ್ಣರಂಜಿತ ಛಾಯಾಚಿತ್ರಗಳನ್ನು ತೆಗೆದಿದ್ದು, ಅದನ್ನು ರಾಮನಗರದ ಅಮೃತ್ ಡಿಜಿಟಲ್ ಸ್ಟುಡಿಯೋದಲ್ಲಿ

ಕಂಪ್ಯೂಟರ್‌ಗೆ ಅಳವಡಿಸಿಕೊಂಡು, ನಂತರ ಅದರಿಂದ ಸದರಿ ಫೋಟೋಗಳನ್ನು ಪ್ರಿಂಟ್ ಹಾಕಿಸಿಕೊಂಡು, ಸಿಡಿಗೂ ಸಹ ಅಳವಡಿಸಿಕೊಂಡು, ಅವುಗಳನ್ನು ಚಾಸಾ.10 ಇವರ ಮುಂದೆ ಹಾಜರುಪಡಿಸಿರುತ್ತೇನೆ.

3. ಸದರಿ ಫೋಟೋಗಳನ್ನು ಈಗ ನೋಡಿ ಗುರುತಿಸುತ್ತಿದ್ದು, ಅವುಗಳನ್ನು ಈಗಾಗಲೇ ಕ್ರಮವಾಗಿ ನಿ.ಪಿ.3 ಮತ್ತು 4 ಎಂದು ಗುರುತಿಸಿದ್ದು ಇರುತ್ತವೆ.

ಪಾಟೀ ಸವಾಲುಃ ಶ್ರೀ. ಜೆ.ಟಿ.ಪಿ., ವಕೀಲರಿಂದ ಆರೋಪಿಗಳ ಪರವಾಗಿಃ ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿರುತ್ತಾರೆ. ಯಾವುದೇ ಸಕಾರಣವಿಲ್ಲದ್ದರಿಂದ ಮತ್ತು ವಿನೋದ್ ಕುಮಾರ್ ವರ್ಸಸ್ ಸ್ಟೇಟ್ ಆಫ್ ಪಂಜಾಬ್ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯ ವಿಚಾರಣೆ ಮತ್ತು ಪಾಟೀ ಸವಾಲುಗಳನ್ನು ಒಂದೇ ದಿನದಂದು ಮಾಡಬೇಕೆಂದು ನಿರ್ದೇಶನವಿರುವುದರಿಂದ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.